# ರಾಣಿ ಚನ್ನಮ್ಮ ವಿಶ್ವವಿದ್ಯಾಲಯ

ವಿದ್ಯಾಸಂಗಮ, ಪೂನಾ–ಬೆಂಗಳೂರು ರಾಷ್ಟ್ರೀಯ ಹೆದ್ದಾರಿ–04. ಬೆಳಗಾವಿ–591 156.

**web site**: www.rcub.ac.in ದೂರವಾಣಿ ಸಂಖ್ಯೆ:0831-2565208, 2565219 **E-mail:** directorcdcrcu@gmail.com

ಕ್ರಮ ಸಂ. ರಾಚವಿ/ಬೆಳಗಾವಿ/ಸಿ.ಡಿ.ಸಿ(ಸಂಯೋಜನೆ)/2021–22/12 ದಿನಾಂಕ:. 11–06–2021

## ಅಧಿಸೂಚನೆ ಪ್ರಕಟಣೆ

**ವಿಷಯ: 2021–22ನೇ ಶೈಕ್ಷಣಿಕ ಸಾಲಿಗಾಗಿ ಸ್ನಾತಕ ಹಾಗೂ ಸ್ನಾತಕೋತ್ತರ ಕೋರ್ಸಗಳಿಗೆ ವಿವಿಧ ಬಗೆಯ ಸಂಯೋಜನೆ, ಸ್ವಾಯತ್ತ ಸ್ಥಾನಮಾಕ್ಕಾಗಿ ಅರ್ಜಿಗಳನ್ನು ಆಹ್ವಾನಿಸುತ್ತಿರುವ ಕುರಿತು.**

**ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 11–06–2021.**

ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸಂಯೋಜನೆಯೊಂದಿಗೆ ಬೆಳಗಾವಿ, ವಿಜಯಪುರ ಮತ್ತು ಬಾಗಲಕೋಟ ಜಿಲ್ಲೆಗಳಲ್ಲಿ 2021–22ನೇ ಸಾಲಿಗಾಗಿ ಹೊಸ ಮಹಾವಿದ್ಯಾಲಯಗಳನ್ನು ಪ್ರಾರಂಭಿಸಲು ಇಚ್ಛಿಸುವ ಸರ್ಕಾರದ ನಿಯಮಾವಳಿಯಂತೆ ನೋಂದಾಯಿಸಲ್ಪಟ್ಟ ಸಂಘ ಸಂಸ್ಥೆಗಳು/ ಸಾರ್ವಜನಿಕ ಟ್ರಸ್ಟ್‌ಗಳಿಂದ ಮತ್ತು 2020–21ನೇ ಸಾಲಿನಲ್ಲಿ ತಾತ್ಕಾಲಿಕ ಸಂಯೋಜನೆ ಹೊಂದಿರುವ ಹಾಗೂ 2020–21ನೇ ಸಾಲಿಗೆ ಶಾಶ್ವತ ಸಂಯೋಜನೆ ಕೊನೆಗೊಳ್ಳುವ ಅಸ್ತಿತ್ವದಲ್ಲಿರುವ ಮಹಾವಿದ್ಯಾಲಯಗಳಿಂದ ಬಿ.ಎ./ ಬಿ.ಎಸ್ಸಿ./ ಬಿ.ಕಾಂ./ ಬಿ.ಸಿ.ಎ./ ಬಿ.ಬಿ.ಎ./ ಬಿ.ಎಸ್.ಡಬ್ಲ್ಯೂ./ ಬಿ.ಇಡಿ./ ಬಿ.ಪಿ.ಇಡಿ./ ಎಂ.ಎ./ ಎಂ.ಕಾಂ./ ಎಂ.ಎಸ್ಸಿ./ ಎಂ.ಇಡಿ./ ಎಂ.ಪಿ.ಇಡಿ./ ಎಂ.ಎಸ್.ಡಬ್ಲ್ಯೂ. ಹಾಗೂ ಸರ್ಟಿಫಿಕೇಟ್ ಕೋರ್ಸ ಇನ್ ಯೋಗಾ/ ಡಿಪ್ಲೋಮಾ/ ಪಿ.ಜಿ. ಡಿಪ್ಲೋಮಾ ಇತ್ಯಾದಿ ಸ್ನಾತಕ/ ಸ್ನಾತಕೋತ್ತರ ಕೋರ್ಸಗಳಿಗೆ ಮುಂದುವರಿಕೆ/ ವಿಸ್ತರಣೆ/ ಹೊಸ ಕೋರ್ಸ/ ಹೊಸ ವಿಷಯ/ ಹೊಸ ವಿಷಯಗಳ ಸಮೂಹ/ ಪ್ರವೇಶ ಮಿತಿ ಹೆಚ್ಚಳ/ ಶಾಶ್ವತ ಸಂಯೋಜನೆ/ ಶಾಶ್ವತ ಸಂಯೋಜನೆ ನವೀಕರಣ/ ಸ್ವಾಯತ್ತ ಸ್ಥಾನಮಾನ ಸೇರಿದಂತೆ ಇತ್ಯಾದಿ ಸಂಯೋಜನೆಗಳಿಗಾಗಿ ಸಂಬಂಧಿಸಿದ ದಾಖಲೆಗಳೊಂದಿಗೆ ಸಂಬಂಧಿತ ಸಂಯೋಜನಾ ಶುಲ್ಕ ಮತ್ತು ಕ್ರೀಡಾ ಶುಲ್ಕ ರೂ.1,000/–ಗಳನ್ನು ಪಾವತಿಸಿ, ಕರ್ನಾಟಕ ಸರ್ಕಾರದ ಸಂಯೋಜನೆ ಸಂಬಂಧಿತ ವೆಬ್‌ಸೈಟ್ ವಿಳಾಸ: www.onlineaffiliation.karnataka.gov.in/Affiliation2122/login.aspx ರ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಯಾವುದೇ ಮಹಾವಿದ್ಯಾಲಯದವರು ಸ್ನಾತಕ ಕೋರ್ಸ ಪ್ರಾರಂಭಿಸಿ ಕನಿಷ್ಠ ಐದು ವರ್ಷಗಳನ್ನು ಪೂರ್ಣಗೊಳಿಸಿದ್ದಲ್ಲಿ ಅಂತಹ ಮಹಾವಿದ್ಯಾಲಯದವರು ಸ್ನಾತಕೋತ್ತರ ಕೋರ್ಸಗಳನ್ನು ಪ್ರಾರಂಭಿಸಬಹುದಾಗಿದೆ ಮತ್ತು ಎಂ.ಬಿ.ಎ./ ಎಂ.ಸಿ.ಎ./ ಬಿ.ಇಡಿ/ ಬಿ.ಪಿ.ಇಡಿ/ ಎಂ.ಇಡಿ./ ಎಂ.ಪಿ.ಇಡಿ. ಇಂತಹ ಕೋರ್ಸ ಪ್ರಾರಂಭಿಸಲು ಎ.ಐ.ಸಿ.ಟಿ.ಇ./ ಎನ್.ಸಿ.ಟಿ.ಇ. ಅಥವಾ ಅಂತಹ ಸಕ್ಷಮ ಪ್ರಾಧಿಕಾರದಿಂದ ಕಡ್ಡಾಯವಾಗಿ ಮಾನ್ಯತೆಯನ್ನು ಪಡೆದುಕೊಂಡಿರಬೇಕು. ಸಂಯೋಜನೆಗೆ ಸಂಬಂಧಿಸಿದ ಶುಲ್ಕಗಳ ವಿವರ ಮತ್ತು ಇನ್ನಿತರ ಮಾಹಿತಿಯನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್ ವಿಳಾಸ: www.rcub.ac.in ದಲ್ಲಿ CDC Link ನಲ್ಲಿ Affiliation Notification-2021-22ನ್ನು ನೋಡಬಹುದಾಗಿದೆ. ಸಂಶೋಧನಾ ಕೇಂದ್ರದ ಮಾನ್ಯತೆಗಾಗಿ ಅರ್ಹ ಮಹಾವಿದ್ಯಾಲಯಗಳು ಮಾತ್ರ ಅರ್ಜಿಗಳನ್ನು ಭೌತಿಕರೂಪದಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿಯ ದೂರವಾಣಿ ಸಂಖ್ಯೆ: 0831–2565219, 208 ಕ್ಕೆ ಸಂಪರ್ಕಿಸಬಹುದಾಗಿದೆ.

| ಅಂತರ್ಜಾಲದ ಮೂಲಕ ಸಂಯೋಜನಾ ಅರ್ಜಿ ಸಲ್ಲಿಸುವುದಕ್ಕಾಗಿ ನಿಗದಿಪಡಿಸಲಾದ ದಿನಾಂಕಗಳು | | |
|---|---|---|
| 1 | ಸಂಯೋಜನಾ ಅರ್ಜಿ ಸಲ್ಲಿಸಲು ದಂಡ ರಹಿತ ಶುಲ್ಕದೊಂದಿಗೆ ಕೊನೆಯ ದಿನಾಂಕ | 26.06.2021 ಸಂಜೆ 5.00ರ ಒಳಗಾಗಿ |
| 2 | ಸಂಯೋಜನಾ ಅರ್ಜಿ ಸಲ್ಲಿಸಲು ರೂ.10,000/– ದಂಡ ಶುಲ್ಕದೊಂದಿಗೆ ಕೊನೆಯ ದಿನಾಂಕ | 30.06.2021 ಸಂಜೆ 5.00ರ ಒಳಗೆ |
| 3 | ಸಂಯೋಜನಾ ಅರ್ಜಿ ಸಲ್ಲಿಸಲು ರೂ.10,000/– ಮತ್ತು ಪ್ರತಿ ದಿನ ರೂ.1,200/– ರಂತೆ ದಂಡ ಶುಲ್ಕದೊಂದಿಗೆ ದಿನಾಂಕ | 03.07.2021 ಸಂಜೆ 5.00ರ ಒಳಗೆ |
| ವಿಶೇಷ ಸೂಚನೆ: ದಿನಾಂಕ: 03.07.2021ರ ನಂತರ ಸಲ್ಲಿಸುವ ಯಾವುದೇ ಸಂಯೋಜನಾ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. | | |

| | |
|---|---|
| ಸಹಿ/–<br>**ಪ್ರೊ. ಎಸ್.ಎಂ. ಗಂಗಾಧರಯ್ಯ**<br>ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ<br>ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. | ಸಹಿ/–<br>**ಪ್ರೊ. ಬಸವರಾಜ ಪದ್ಮಶಾಲಿ**<br>ಕುಲಸಚಿವರು<br>ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. |